ಕರ್ನಾಟಕ ಸರ್ಕಾರ

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16–ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು–52.

ಸಂಖ್ಯೆ:ಹಿಂವಕಇ/ತರಬೇತಿ–4/ಸಿಇಟಿ/ಸಿಆರ್–8/2019–20 ದಿನಾಂಕ: 25.09.2019

## ಪ್ರಕಟಣೆ

2019–20ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ NEET ಹಾಗೂ JEE (ADVANCED & MAINS) ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ Online ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:15.10.2019 ಸಂಜೆ 5:00 ಗಂಟೆ ಆಗಿದ್ದು, ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ www.backwardclasses.kar.nic.in ನ್ನು ನೋಡಲು ತಿಳಿಸಿದೆ.

**ವಿಶೇಷ ಸೂಚನೆ:–**

ತರಬೇತಿಯನ್ನು ಬೆಂಗಳೂರು ನಗರ, ಬೆಳಗಾವಿ, ಕಲಬುರ್ಗಿ, ಮೈಸೂರು, ದಕ್ಷಿಣ ಕನ್ನಡ ಮತ್ತು ಧಾರವಾಡ ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ ನೀಡಲು ಉದ್ದೇಶಿಸಿದ್ದು, ಈ ಮೇಲ್ಕಂಡ ಜಿಲ್ಲಾ ಕೇಂದ್ರಗಳಲ್ಲಿ ಪ್ರಥಮ ಪಿ.ಯು.ಸಿ/10+1 ವ್ಯಾಸಂಗ ಮಾಡುತ್ತಿರುವ (ವಿಜ್ಞಾನ ವಿಭಾಗದಲ್ಲಿ) ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

**ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಸಾಮಾನ್ಯ ಅರ್ಹತೆ ಮತ್ತು ಸೂಚನೆಗಳು:**

**ಅರ್ಹತೆಗಳು**

- ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
- ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಅಥವಾ 3ಬಿ ಯ ಜಾತಿಗಳಿಗೆ ಸೇರಿರಬೇಕು.
- ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ರೂ.6.00 ಲಕ್ಷಗಳು.
- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸದರಿ ಪರೀಕ್ಷಾ ಪೂರ್ವ ತರಬೇತಿಗಳನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ/10ನೇ ತರಗತಿಯನ್ನು ಪೂರ್ಣಗೊಳಿಸಿರಬೇಕು.
- ಸದರಿ ಪರೀಕ್ಷಾ ಪೂರ್ವ ತರಬೇತಿಯನ್ನು ಖಾಸಗಿ ಸಂಸ್ಥೆಗಳ ಮೂಲಕ ನೀಡಲಾಗುವುದು. ತರಬೇತಿಯು ಉಚಿತವಾಗಿದ್ದು, ತರಬೇತಿ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ತರಬೇತಿ ಭತ್ಯೆ, ಪ್ರಯಾಣ ಭತ್ಯೆ ಹಾಗೂ ಇತರೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

1. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ವಿದ್ಯಾರ್ಥಿಯ ವಯೋಮಿತಿ 20 ವರ್ಷ ಅಥವಾ ಅದಕ್ಕಿಂತ ಕಡಿಮೆ ಇರಬೇಕು.
2. Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:15.10.2019 ಸಂಜೆ 5:00 ಗಂಟೆ
3. ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ www.backwardclasses.kar.nic.inಅನ್ನು ನೋಡುವುದು.

ಸಹಾಯ ವಾಣಿ: 080–65970004

(ಸಮಯ ಬೆಳಗ್ಗೆ 10.00 ರಿಂದ ಸಂಜೆ 5.00 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.